**ಜೆಎಸ್‌ಎಸ್ ಮಹಿಳಾ ಕಾಲೇಜು, ಕೊಳ್ಳೇಗಾಲ**

ದಿನಾಂಕ : 05-09-2018

## ಗುರಿ ತೋರುವ ಗುರುವಿನ ಸ್ಥಾನ ಎಲ್ಲಕ್ಕಿಂತ ಮಿಗಿಲು – ಶ್ರೀಮತಿ ಎ ಎಸ್ ಸ್ಮಿತಾ

### ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ಶಿಕ್ಷಕರ ದಿನಾಚರಣೆ

ಕೊಳ್ಳೇಗಾಲ : 05 ಸೆಪ್ಟೆಂಬರ್, 2018 : ಬದುಕಿಕೊಂದು ಗುರಿ ತೋರುವ ಗುರುವಿನ ಸ್ಥಾನಕ್ಕಿಂತ ಮಿಗಿಲಾದ ಶ್ರೇಷ್ಠತೆ ಯಾವುದೂ ಇಲ್ಲ ಎಂದು ಭೂಗೋಳಶಾಸ್ತ್ರ ವಿಭಾಗದ ಮುಖ್ಯಸ್ಥೆ ಶ್ರೀಮತಿ ಎ ಎಸ್ ಸ್ಮಿತಾರವರು ತಿಳಿಸಿದರು.

ಇಲ್ಲಿನ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ವಿದ್ಯಾರ್ಥಿನಿಯರು ತಮ್ಮ ನೆಚ್ಚಿನ ಗುರುಗಳ ಸ್ಮರಣೆಗಾಗಿ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ನಮ್ಮ ಸಂಸ್ಕೃತಿಯ ಪ್ರಕಾರ ತಂದೆ – ತಾಯಿಯರ ನಂತರದ ಅತ್ಯಂತ ಪೂಜನೀಯ ವ್ಯಕ್ತಿ ಗುರು. ಊರಿಗೆ ಅರಸನಾದರೂ ತಾಯಿಗೆ ಮಗ ಎಂಬಂತೆ ವ್ಯಕ್ತಿ ಎಷ್ಟೇ ಉನ್ನತ ಸ್ಥಾನದಲ್ಲಿದ್ದರೂ ಗುರುವಿನ ಮುಂದೆ ಶಿಷ್ಯ ಮಾತ್ರ ಕತ್ತಲಿನಿಂದ ಬೆಳಕಿನೆಡೆಗೆ, ಅಜ್ಞಾನಿಯನ್ನು ಸುಜ್ಞಾನಿಯನ್ನಾಗಿ ಮಾಡುವ ಗುರುವಿನ ಪಾತ್ರ ತುಂಬಾ ದೊಡ್ಡದು ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ ಪ್ರೊ. ಉಮೇಶ ಸನ್ಮಾರ್ಗ ತೋರುವವರು, ಬದುಕಿನ ಕವಲು ದಾರಿಯಲ್ಲಿ ನಿಂತಾಗ ಮಾರ್ಗದರ್ಶನ ಮಾಡುವವರು, ಸೋತಾಗ ಬೆನ್ನು ತಟ್ಟಿ ಪ್ರೋತ್ಸಾಹಿಸುವವರು, ನೋವಿನ ಕಣ್ಣೀರನ್ನು ಒರೆಸುವವರು, ಎಲ್ಲವನ್ನು ಕಳೆದುಕೊಂಡು ಸೋತು ಸುಣ್ಣವಾದಾಗ ಚೈತನ್ಯ ತುಂಬುವವರು ಗುರುವಿನ ಸ್ಥಾನದಲ್ಲಿ ನಿಲ್ಲುತ್ತಾರೆ. ಬದುಕು ಸುಸಂಸ್ಕೃತವಾಗಿರಲು, ವಿಕೃತವಾಗದೆ ಸುಕೃತವಾಗಲು ಗುರುವಿನ ಸಲಹೆ ಬಹುಮುಖ್ಯ ಎಂದು ತಿಳಿಸಿ, ನಮ್ಮ ದೇಶದಲ್ಲಿ ಶಿಕ್ಷಕರ ದಿನವನ್ನಾಗಿ ಡಾ. ಸರ್ವಪಲ್ಲಿ ರಾಧಾಕೃಷ್ಣನ್‌ರವ ಜನ್ಮ ದಿನವಾದ ಸೆಪ್ಟೆಂಬರ್ 5 ರಂದು 20ನೇ ಶತಮಾನದಿಂದೀಚೆಗೆ ಆಚರಿಸಲಾಗುತ್ತಿದೆ. ಪ್ರಪಂಚದ ಬೇರೆ ಬೇರೆ ದೇಶಗಳಲ್ಲಿ ಬೇರೆ ಬೇರೆ ದಿನವನ್ನು ಶಿಕ್ಷಕರ ದಿನವನ್ನಾಗಿ ಆಚರಿಸಲಾಗುತ್ತಿದೆ. ಇದಕ್ಕೆ ಕಾರಣ ಆಯಾಯ ದೇಶದ ಶೈಕ್ಷಣಿಕ ಕ್ಷೇತ್ರದಲ್ಲಿ ನಡೆದ ಒಂದು ವಿಶೇಷ ಘಟನೆಯ ಆಧಾರದ ಮೇಲೆ ಆಚರಿಸಲಾಗುತ್ತಿದೆ ಎಂದು ಆಚರಣೆಯ ಹಿಂದಿನ ಉದ್ದೇಶವನ್ನು ವಿವರಿಸಿದರು.

ವಿದ್ಯಾರ್ಥಿನಿಯರು ತಮ್ಮ ನೆಚ್ಚಿನ ಗುರುಗಳನ್ನು ನೆನೆದು ಪ್ರಸ್ತುತ ಗುರುಗಳಿಗೆ ವಿವಿಧ ರೀತಿಯ ಆಟೋಟ ಹಾಗೂ ಸ್ಪರ್ಧೆಗಳನ್ನು ಆಯೋಜಿಸಿ ಸಂಭ್ರಮಿಸಿದರು.

ಕು. ಅಶ್ವಿನಿ ಪ್ರಥಮ ಬಿ.ಕಾಂ ಸ್ವಾಗತಿಸಿ, ವಂದಿಸಿದರು. ಕು. ಆರ್ ಪಿ ಸಿಂಧು ಕಾರ್ಯಕ್ರಮ ನಿರೂಪಿಸಿದರು.

ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿರುವ ಅಧ್ಯಾಪಕ ವೃಂದ



ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಾಚಾರ್ಯ ಪ್ರೊ. ಉಮೇಶರವರು ಮಾತನಾಡುತ್ತಿರುವುದು.



ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಶ್ರೀಮತಿ ಎ ಎಸ್ ಸ್ಮಿತಾ ರವರು ಮಾತನಾಡುತ್ತಿರುವುದು.



ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿರುವ ವಿದ್ಯಾರ್ಥಿನಿಯರುಗಳು

